ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 200 ಟಿಇಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:30.09.2021.

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ:

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಜ್ಞಾನಸಂಗಮ, ಬೆಳಗಾವಿ.

ಮಾನ್ಯರೇ,

ವಿಷಯ: ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಮಂಗಳೂರು ಈ ಕಾಲೇಜಿಗೆ ಸ್ವಾಯತ್ತತೆಯ ಮಾನ್ಯತೆ ನೀಡುವ ಬಗ್ಗೆ.

ಉಲ್ಲೇಖ: ಜಂಟಿ ಕಾರ್ಯದರ್ಶಿ, ವಿಶ್ವವಿದ್ಯಾಲಯ ಧನ ಸಹಾಯ ಆಯೋಗ, ನವದೆಹಲಿ ಇವರ ಪತ್ರ ಸಂಖ್ಯೆ:F.22-1/2017(AC), ದಿನಾಂಕ:07.09.2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಮಂಗಳೂರು ಈ ಕಾಲೇಜಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ 2030-31ರವರೆಗೆ Conferment of Autonomous Status Upon Colleges and Measures for Maintenance of Standards in Autonomous Colleges Regulations, 2018ರಡಿ ಸ್ವಾಯತ್ತತೆ ಸ್ಥಾನಮಾನದ ಮಾನ್ಯತೆ ನೀಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

1. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಅನುಮೋದನೆ ಪಡೆಯತಕ್ಕದ್ದು;
2. ಸದರಿ ಕಾಲೇಜಿಗೆ ಯು.ಜಿ.ಸಿ.ಯಿಂದ ಸಹಮತಿ ಪಡೆಯತಕ್ಕದ್ದು;
3. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸ್ವಾಯತ್ತತೆ ಸ್ಥಾನಮಾನದ ಮಾನ್ಯತೆಗೆ ಸಂಬಂಧಿಸಿದಂತೆ, ಹೊರಡಿಸಿರುವ ಆದೇಶ/ಪರಿನಿಯಮಾವಳಿಯಲ್ಲಿ ತಿಳಿಸಿರುವ ಎಲ್ಲಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು;

4. ವಿದ್ಯಾರ್ಥಿಗಳ ಹಿತದೃಷ್ಟಿ ಹಾಗೂ ಶೈಕ್ಷಣಿಕ ಗುಣಮಟ್ಟ ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆಯೇ ಎಂಬ ಬಗ್ಗೆ ವಿಶ್ವವಿದ್ಯಾಲಯವು ಕಾಲಕಾಲಕ್ಕೆ ಪರಿಶೀಲಿಸತಕ್ಕದ್ದು.

ತಮ್ಮ ನಂಬುಗೆಯ,

30/09/2021

(ಎಂ.ಜಿ.ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ)

30/9/21

ಪ್ರತಿ: ಪ್ರಾಂಶುಪಾಲರು, ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಸಹ್ಯಾದ್ರಿ ಕ್ಯಾಂಪಸ್, ಆಡ್ಯಾರ್, ಮಂಗಳೂರು-575 007.